## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ರಸ್ತೆಗಳು ಸುಸ್ಥಿತಿಯಲ್ಲಿಲ್ಲದೆ ಅವುಗಳನ್ನು ಹಸ್ತಾಂತರಿಸಿರುವ ದೂರಿನ ಕುರಿತು ತನಿಖೆ ನಡೆಸಿ ವರದಿ ನೀಡುವ ಬಗ್ಗೆ.

ಓದಲಾಗಿದೆ: 1.ದಿನಾಂಕ:20-5-2014ರಂದು ನಡೆದ ಅಂದಾಜು ಸಮಿತಿ ಸಭೆಯಲ್ಲಿ ನಡೆದ ಚರ್ಚೆ.

2.ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳ ಟಿಪ್ಪಣಿ ಸಂ: ಗ್ರಾಅಪ/ ಅಮುಕಾ/79/14 ದಿನಾಂಕ:20-5-2014

**ಪ್ರಸ್ತಾವನೆ:**

ಶ್ರೀ ಶಿವಾನಂದ ಪಾಟೀಲ್ ಮಾನ್ಯ ಅಂದಾಜು ಸಮಿತಿ ಹಂಗಾಮಿ ಅಧ್ಯಕ್ಷರು ಮತ್ತು ಶ್ರೀ ಲಕ್ಷ್ಮಣ ಸವದಿ, ಮಾಜಿ ಸಚಿವರು ಇವರುಗಳು ತಮ್ಮ ಕ್ಷೇತ್ರದಲ್ಲಿ ಪಿಎಂಜಿಎಸ್‌ವೈ ಯೋಜನೆಯಡಿ ರಸ್ತೆಗಳು ಸುಸ್ಥಿತಿಯಲ್ಲಿಲ್ಲದೆ ಅವುಗಳನ್ನು ಹಸ್ತಾಂತರಿಸಲಾಗಿದೆಯೆಂದು ದಿನಾಂಕ:20-5-2014ರಂದು ನಡೆದ ಅಂದಾಜು ಸಮಿತಿ ಸಭೆಯ ಚರ್ಚೆಯಲ್ಲಿ ತಿಳಿಸಿದ ಹಿನ್ನೆಲೆಯಲ್ಲಿ ಈ ಎರಡು ಪ್ರಕರಣಗಳಿಗೆ ತನಿಖೆ ಮಾಡಿ ವರದಿ ನೀಡಲು SQMಗಳನ್ನು ನಿಯೋಜಿಸಿ ವರದಿ ಪಡೆಯಲು ಕ್ರಮ ವಹಿಸುವಂತೆ ಮೇಲೆ ಓದಲಾದ 2ರ ಟಿಪ್ಪಣಿಯಲ್ಲಿ ಸೂಚಿಸಲಾಗಿದೆ. ಅದರಂತೆ, ತನಿಖೆಗಾಗಿ ಒಬ್ಬರು ರಾಜ್ಯ ಗುಣ ನಿಯಂತ್ರಣ ಮಾನಿಟರ್ ರವರನ್ನು ನಿಯೋಜಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:233/10:ಆರ್‌ಆರ್‌ಸಿ:2013, ಬೆಂಗಳೂರು,ದಿನಾಂಕ:7-6-2014**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ರಸ್ತೆಗಳು ಸುಸ್ಥಿತಿಯಲ್ಲಿಲ್ಲದೆ ಅವುಗಳನ್ನು ಹಸ್ತಾಂತರಿಸಲಾಗಿದೆ ಎಂದು ತಿಳಿಸಿರುವ ಮಾನ್ಯ ಶ್ರೀ ಶಿವಾನಂದ ಪಾಟೀಲ್, ಬಸವನ ಬಾಗೇವಾಡಿ ಕ್ಷೇತ್ರ ಹಾಗೂ ಮಾನ್ಯ ಶ್ರೀ ಲಕ್ಷ್ಮಣ ಸವದಿ ರವರ ಅಥಣಿ ಕ್ಷೇತ್ರದ ಈ 2 ಪ್ರಕರಣಗಳಲ್ಲಿ ಸಂಪೂರ್ಣ ತನಿಖೆ ಮಾಡಿ ಪೂರ್ಣ ವಿವರಗಳೊಂದಿಗೆ ವರದಿ ಸಲ್ಲಿಸುವಂತೆ ಆದೇಶಿಸಿ, ಕೆಳಕಂಡ SQMರವರನ್ನು ನೇಮಿಸಲಾಗಿದೆ.

| |
|---|
| **ಶ್ರೀ ಎಸ್. ನಟರಾಜ್ ಬಿನ್ ಶ್ರೀ ಎಸ್. ವೆಂಕಟಪ್ಪ**<br>**ನಿವೃತ್ತ ಇಂಜಿನಿಯರ್**<br>**ರಾಜ್ಯ ಗುಣ ನಿಯಂತ್ರಣ ಮಾನಿಟರ್**<br>**ಮೊಬೈಲ್ ಸಂಖ್ಯೆ :9986424189** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು,
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು

2. ಮಹಾಲೇಖಪಾಲರು (ಆಡಿಟ್-1)) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಬೆಂಗಳೂರು
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್),ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, 3ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು-9 ಇವರಿಗೆ ಅಗತ್ಯ ಕ್ರಮಕ್ಕಾಗಿ.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಿಜಾಪುರ
11. ಶ್ರೀ ಎಸ್.ನಟರಾಜ್ ಬಿನ್ ಶ್ರೀ ಎಸ್. ವೆಂಕಟಪ್ಪ, ನಂ:8, 3ನೇ ಕ್ರಾಸ್, ತುಮಕೂರು.572101
12. ಕಾರ್ಯಪಾಲಕ ಇಂಜಿನಿಯರ್, ಪಿಎಂಜಿಎಸ್‌ವೈ ಯೋಜನಾ ವಿಭಾಗ, ಬಿಜಾಪುರ
13. ಮಾಹಿತಿ ಕೇಂದ್ರಕ್ಕೆ.